# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಖಾಸಗಿ ವಾಣಿಜ್ಯ ವಾಹನ ಚಾಲಕರ ಅಪಘಾತ ಪರಿಹಾರ ವಿಮಾ ಯೋಜನೆಯಡಿ ನೋಂದಾಯಿತರಾಗಿರುವ ಚಾಲಕರಿಗೆ ತರಬೇತಿಯನ್ನು ಹಾಗೂ ಪ್ರೋತ್ಸಾಹಧನವನ್ನು ನೀಡುವ "ಅಪಘಾತ ಜೀವ ರಕ್ಷಕ ಯೋಜನೆ"ಯನ್ನು ಜಾರಿಗೊಳಿಸುವ ಬಗ್ಗೆ.

ಓದಲಾಗಿದೆ: (1) ಕಾರ್ಮಿಕ ಆಯುಕ್ತರ ಪತ್ರ ಸಂ:ಎಸಿಟಿ-1/ಸಿಆರ್-10/2016-17 ದಿ:12.05.2016.

(2) ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂ:ಆಇ 228 ವೆಚ್ಚ-9/2016 ದಿನಾಂಕ:01.04.2016.

(3) ಸ.ಆ.ಸಂ:ಕಾಇ 127 ಎಲ್ಇಟಿ 2016 ದಿ:04.05.2016.

*****

**ಪ್ರಸ್ತಾವನೆ:-**

ಮಾನ್ಯ ಮುಖ್ಯಮಂತ್ರಿಗಳು 2016-17ನೇ ಸಾಲಿನ ಆಯವ್ಯಯ ಭಾಷಣದಲ್ಲಿ, "ಖಾಸಗಿ ವಾಣಿಜ್ಯ ವಾಹನ ಚಾಲಕರ ಅಪಘಾತ ಪರಿಹಾರ ಯೋಜನೆಯಡಿ ನೋಂದಣಿ ಮಾಡಿರುವ 12 ಲಕ್ಷ ಆಟೋ ಚಾಲಕರಿಗೆ ಕಾರ್ಮಿಕ, ಒಳಾಡಳಿತ, ಸಾರಿಗೆ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಗಳ ಸಹಯೋಗದೊಂದಿಗೆ ಪ್ರಥಮ ಚಿಕಿತ್ಸೆ ತರಬೇತಿ ನೀಡಿ ಅವರನ್ನು ಅಪಘಾತ ಜೀವ ರಕ್ಷಕರನ್ನಾಗಿಸುವ ನಿಟ್ಟಿನಲ್ಲಿ ರೂ.1.00 ಕೋಟಿ ಗಳ ಅನುದಾನದಲ್ಲಿ "ಅಪಘಾತ ಜೀವ ರಕ್ಷಕ" ಯೋಜನೆ"ಯನ್ನು ಜಾರಿಗೆ ತರುವುದಾಗಿ ಘೋಷಿಸಿರುತ್ತಾರೆ. ಅದರಂತೆ, ಮೇಲೆ ಓದಲಾದ (1) ಪತ್ರದಲ್ಲಿ ಕಾರ್ಮಿಕ ಆಯುಕ್ತರು ಯೋಜನೆಯನ್ನು ಅನುಷ್ಠಾನಗೊಳಿಸುವ ಬಗ್ಗೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ (2) ರಲ್ಲಿ 2016-17ನೇ ಸಾಲಿಗೆ ಲೆಕ್ಕ ಶೀರ್ಷಿಕೆ 2230-01-103-7-03 ರಡಿ ಮುಂದುವರೆದ ಯೋಜನೆಯಾದ ಚಾಲಕರಿಗೆ ವಿಮಾ ಯೋಜನೆಗೆ ಆಯವ್ಯಯ ಘೋಷಣೆಯ 'ಅಪಘಾತ ಜೀವ ರಕ್ಷಕ' ಯೋಜನೆಗೆ ರೂ.100.00 ಲಕ್ಷಗಳನ್ನು ಸೇರಿದಂತೆ ಒಟ್ಟು ರೂ.850.00 ಲಕ್ಷಗಳನ್ನು ಒದಗಿಸಿರುತ್ತದೆ.

ಮೇಲೆ ಓದಲಾದ (3) ರಲ್ಲಿ ಕಾರ್ಮಿಕ ಇಲಾಖೆಯ ಮುಂದುವರೆದ ಯೋಜನಾ ಕಾರ್ಯಕ್ರಮಗಳನ್ನು ಮುಂದುವರೆಸಿ 2016-17ನೇ ಸಾಲಿಗೆ ಲೆಕ್ಕ ಶೀರ್ಷಿಕೆ 2230-01-103-7-03 ರಡಿ ಚಾಲಕರಿಗೆ ವಿಮಾ ಯೋಜನೆಗೆ ಒಟ್ಟು ರೂ.850.00 ಲಕ್ಷಗಳನ್ನು ಒದಗಿಸಿ ಆದೇಶಿಸಲಾಗಿದೆ.

ಜಗತ್ತಿನಾದ್ಯಂತ ಸಂಭವಿಸುವ ಅಪಘಾತಗಳಲ್ಲಿ ಭಾರತವು ಹೆಚ್ಚಿನ ಸಂಖ್ಯೆಯ ಅಪಘಾತ ಪ್ರಕರಣಗಳನ್ನು ಹೊಂದಿರುವುದಾಗಿ ಪರಿಗಣಿಸಲ್ಪಟ್ಟಿದೆ. ಅಪಘಾತಕ್ಕೊಳಗಾಗುವ ಸಂತ್ರಸ್ತರಿಗೆ ಸ್ಥಳದಲ್ಲಿಯೇ ತುರ್ತು ಮಾನವೀಯ ಸಹಾಯ ಹಾಗೂ ಪ್ರಥಮ ಚಿಕಿತ್ಸೆಯನ್ನು ನೀಡಿ, ತದನಂತರ ಕ್ಲುಪ್ತಕಾಲದಲ್ಲಿ ಹೆಚ್ಚಿನ ವೈದ್ಯಕೀಯ ಚಿಕಿತ್ಸೆ ನೀಡಿದಲ್ಲಿ, ಅಪಘಾತ ಸಂತ್ರಸ್ತರನ್ನು ಪ್ರಾಣಾಪಾಯದಿಂದ ರಕ್ಷಿಸಿ, ತನ್ಮೂಲಕ ಅಂತಹವರ ಕುಟುಂಬವನ್ನು ಸಹಾ ಅತಂತ್ರದಿಂದ ಪಾರುಮಾಡಬಹುದಾಗಿರುತ್ತದೆ. ಈ ಹಿನ್ನೆಲೆಯಲ್ಲಿ, ಅಪಘಾತಕ್ಕೊಳಗಾದ ಸಂತ್ರಸ್ತರಿಗೆ ಕೂಡಲೇ ಪ್ರಥಮ ಚಿಕಿತ್ಸೆಯನ್ನು ನೀಡಿ, ಹತ್ತಿರದ ಚಿಕಿತ್ಸಾಲಯಕ್ಕೆ ಸೇರಿಸಿ, ಸಂಬಂಧಪಟ್ಟ ಪೋಲೀಸ್ ಠಾಣೆಗೆ ಮಾಹಿತಿ ನೀಡಿ, ಆ ಮೂಲಕ ಗಾಯಾಳುವಿನ ಪ್ರಾಣ ರಕ್ಷಣೆಯನ್ನು ಮಾಡುವುದನ್ನು ಉತ್ತೇಜಿಸುವ ಮಹತ್ತರವಾದ ಸಾರ್ವಜನಿಕ

... 2

ಹಿತದೃಷ್ಟಿಯಿಂದ ಕರ್ನಾಟಕ ಸರ್ಕಾರವು "ಅಪಘಾತ ಜೀವ ರಕ್ಷಕ ಯೋಜನೆ"ಯನ್ನು ಜಾರಿಗೆ ತರಲು ಉದ್ದೇಶಿಸಿದೆ. ಈ ಹಿನ್ನೆಲೆಯಲ್ಲಿ ಈ ಕೆಳಕಂಡಂತೆ ಸರ್ಕಾರಿ ಆದೇಶವನ್ನು ಹೊರಡಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಕಾಇ 145 ಎಲ್ಇಟಿ 2016,**
**ಬೆಂಗಳೂರು, ದಿನಾಂಕ:17.08.2016**

'ಅಪಘಾತ ಜೀವರಕ್ಷಕ ಯೋಜನೆ' ಕಾರ್ಯಕ್ರಮವು ಈಗಾಗಲೇ ಜಾರಿಯಲ್ಲಿರುವ ವಾಹನ ಚಾಲಕರ ವಿಮಾ ಯೋಜನೆಗೆ ಪೂರಕವಾಗಿರುವುದರಿಂದ ಸದರಿ ಕಾರ್ಯಕ್ರಮವನ್ನು ಜಾರಿಯಲ್ಲಿರುವ ವಾಹನ ಚಾಲಕರ ವಿಮಾ ಯೋಜನೆ ಕಾರ್ಯಕ್ರಮಕ್ಕೆ ಹೊಂದಾಣಿಕೆ ಮಾಡಿಕೊಂಡು, 2016–17ನೇ ಸಾಲಿಗೆ ಲೆಕ್ಕ ಶೀರ್ಷಿಕೆ 2230-01-103-7-03 – ಚಾಲಕರಿಗೆ ವಿಮಾ ಯೋಜನೆಯಡಿ ಒದಗಿಸಿರುವ ರೂ.850.00 ಲಕ್ಷಗಳ ಅನುದಾನದಲ್ಲಿ, ರೂ.100.00 ಲಕ್ಷಗಳನ್ನು ಬಳಸಿಕೊಂಡು 'ಅಪಘಾತ ಜೀವರಕ್ಷಕ ಯೋಜನೆ' ಯನ್ನು ಅನುಷ್ಠಾನಗೊಳಿಸಲು ಆದೇಶಿಸಿದೆ.

"ಅಪಘಾತ ಜೀವ ರಕ್ಷಕ ಯೋಜನೆ" ಯನ್ನು ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ, ಕಾರ್ಮಿಕ ಇಲಾಖೆ, ಒಳಾಡಳಿತ ಇಲಾಖೆ, ಸಾರಿಗೆ ಇಲಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮತ್ತು ಗೃಹ ಇಲಾಖೆಗಳು ಹಾಗೂ ಇತರ ನಿಯೋಗಿಗಳ ಸಹಯೋಗದೊಂದಿಗೆ ಜಾರಿಗೊಳಿಸುವುದು.

ಈ ಯೋಜನೆಯ ಅನುಷ್ಠಾನಕ್ಕಾಗಿ 2016–17ನೇ ಸಾಲಿನ ಆಯವ್ಯಯದಡಿ ರೂ.100.00 ಲಕ್ಷ (ನೂರು ಲಕ್ಷ ರೂಪಾಯಿಗಳು) ಗಳನ್ನು ಸದರಿ ಯೋಜನೆಗಾಗಿ ಖರ್ಚು ಮಾಡಲು ಈ ಮೂಲಕ ಸರ್ಕಾರದ ಮಂಜೂರಾತಿಯನ್ನು ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಗೆ ನೀಡಲಾಗಿದೆ.

ಈ ಆದೇಶವನ್ನು ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ: ಯೋಇ 84 ಜಶ 2016 ದಿನಾಂಕ:02.07.2016 ಮತ್ತು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 459 ವೆಚ್ಚ–9/2016 ದಿನಾಂಕ:28.07.2016 ರಲ್ಲಿ ನೀಡಿರುವ ಸಹಮತಿಯ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಜಿ.[illegible]ರಾಜು)
ಸರ್ಕಾರದ ಅಧೀನ ಕಾರ್ಯದರ್ಶಿ
ಕಾರ್ಮಿಕ ಇಲಾಖೆ

**ಇವರಿಗೆ,**
ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ಬೆಂಗಳೂರು ಇವರಿಗೆ ಈ ಆದೇಶವನ್ನು ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸಿ, ಸದರಿ ಪ್ರಕಟಣೆಯ 100 ಪ್ರತಿಗಳನ್ನು ಸರ್ಕಾರದ ಅಧೀನ ಕಾರ್ಯದರ್ಶಿ, ಕಾರ್ಮಿಕ ಇಲಾಖೆ, 4ನೇ ಮಹಡಿ, ವಿಕಾಸಸೌಧ, ಬೆಂಗಳೂರು–1 ಇವರಿಗೆ, ಕಳುಹಿಸುವಂತೆ ಕೋರಲಾಗಿದೆ.

**ಪ್ರತಿಗಳು:**

1. ಮಹಾಲೇಖಪಾಲರು, ಲೆಕ್ಕಪತ್ರ/ಲೆಕ್ಕಪರಿಶೋಧನೆ, ಕರ್ನಾಟಕ, ಬೆಂಗಳೂರು.

2. ಕಾರ್ಮಿಕ ಆಯುಕ್ತರು, ಕಾರ್ಮಿಕ ಭವನ, ಬನ್ನೇರುಘಟ್ಟ ರಸ್ತೆ, ಬೆಂಗಳೂರು-29.
3. ಸರ್ಕಾರದ ಕಾರ್ಯದರ್ಶಿ (ಬಿ ಅಂಡ್ ಆರ್), ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಯೋಜನಾ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
5. ನಿರ್ದೇಶಕರು, ಯೋಜನಾ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
6. ಜಂಟಿ ಕಾರ್ಮಿಕ ಆಯುಕ್ತರು ಹಾಗೂ ಜಂಟಿ ಕಾರ್ಯದರ್ಶಿಗಳು, ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ, ಕಾರ್ಮಿಕ ಭವನ, ಬನ್ನೇರುಘಟ್ಟ ರಸ್ತೆ, ಬೆಂಗಳೂರು.
7. ಕಾರ್ಮಿಕ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
8. ಸರ್ಕಾರದ ಅಪರ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಕಾರ್ಮಿಕ ಇಲಾಖೆ, ವಿಕಾಸಸೌಧ, ಬೆಂಗಳೂರು.
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.